# ಕರ್ನಾಟಕ ವಿಧಾನ ಪರಿಷತ್ತು

## ಲಘು ಪ್ರಕಟಣೆ ಭಾಗ – 2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

ಸೋಮವಾರ, 12ನೇ ಡಿಸೆಂಬರ್ 2022

*****

ಸಂಖ್ಯೆ: 150

### ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನದ ಸಂಬಂಧ ಮಾನ್ಯ ಶಾಸಕರುಗಳ ಮಾಹಿತಿಗಾಗಿ

ವಿಧಾನ ಪರಿಷತ್ತಿನ 148ನೇ ಅಧಿವೇಶನವು ದಿನಾಂಕ:19.12.2022ರಿಂದ 30.12.2022ರವರೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯಲಿರುವುದರಿಂದ ವಿಧಾನ ಪರಿಷತ್ತಿನ ಸಚಿವಾಲಯವು ದಿನಾಂಕ:17.12.2022ರಿಂದ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಕಾರ್ಯನಿರ್ವಹಿಸಲಿದೆ.

ಅಧಿವೇಶನದಲ್ಲಿ ಪಾಲ್ಗೊಳ್ಳುವ ಮಾನ್ಯ ಶಾಸಕರುಗಳಿಗೆ ನಗರದ ಹೋಟೆಲ್‌ಗಳಲ್ಲಿ ದಿನಾಂಕ:17.12.2022ರಿಂದ ಕೊಠಡಿಗಳನ್ನು ಕಾಯ್ದಿರಿಸಲಾಗಿದೆ. ವಸತಿ ಸೌಕರ್ಯದ ಮಾಹಿತಿಯನ್ನು ಶ್ರೀ ಲಾಲೇಮಶಾಕ್ ಹೆಚ್.ಹಕೀಂ, ಶಾಖಾಧಿಕಾರಿ (ಮೊಬೈಲ್ ದೂರವಾಣಿ ಸಂಖ್ಯೆ:9448688929) ಇವರ ಮುಖೇನ ಪಡೆದುಕೊಳ್ಳಲು ಕೋರಲಾಗಿದೆ.

ಮಾನ್ಯ ಶಾಸಕರುಗಳ ಜೊತೆಯಲ್ಲಿ ಆಗಮಿಸುವ ಆಪ್ತ ಸಹಾಯಕರುಗಳು ಹಾಗೂ ವಾಹನ ಚಾಲಕರುಗಳಿಗೆ ಬೆಳಗಾವಿಯಲ್ಲಿ ವಸತಿ ಹಾಗೂ ಸಾರಿಗೆ ಸೌಕರ್ಯಗಳನ್ನು ಈ ಹಿಂದಿನಂತೆ ತಮ್ಮ ಹಂತದಲ್ಲಿಯೇ ವ್ಯವಸ್ಥೆ ಮಾಡಿಕೊಳ್ಳಲು ಕೋರಲಾಗಿದೆ.

ಅಧಿವೇಶನದ ಸಮಯದಲ್ಲಿ ಮಾನ್ಯ ಶಾಸಕರುಗಳಿಗೆ ಬೆಳಗಿನ ಉಪಾಹಾರವನ್ನು ಅವರುಗಳು ವಾಸ್ತವ್ಯ ಹೂಡಲಿರುವ ಹೋಟೆಲ್‌ಗಳಲ್ಲಿಯೇ ವ್ಯವಸ್ಥೆ ಮಾಡಲಾಗಿದ್ದು, ಮಧ್ಯಾಹ್ನದ ಊಟದ ವ್ಯವಸ್ಥೆಯವನ್ನು ಸುವರ್ಣ ವಿಧಾನಸೌಧದಲ್ಲಿ ಏರ್ಪಡಿಸಲಾಗಿರುತ್ತದೆ. ರಾತ್ರಿ ಊಟದ ವ್ಯವಸ್ಥೆಯನ್ನು ಈ ಹಿಂದಿನಂತೆ ಮಾನ್ಯ ಶಾಸಕರುಗಳೇ ಮಾಡಿಕೊಳ್ಳಲು ಕೋರಲಾಗಿದೆ.

ಕೆ.ಆರ್. ಮಹಾಲಕ್ಷ್ಮಿ,
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಶಾಸಕರುಗಳಿಗೆ,

www://kla.kar.nic.in/council/council.htm